ರಸ್ತೆ ಅಗಲೀಕರಣ

251 (461) ಶ್ರೀ ಗೋಪಾಲಕೃಷ್ಣ ಬೇಳೂರು (ಸಾಗರ) :– ಲೋಕೋಪಯೋಗಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸಾಗರ–ಹಾವೇರಿ ರಸ್ತೆ ಶಿವಪ್ಪನಾಯಕ ಸರ್ಕಲ್‌ನಿಂದ ಸಿದ್ದೇಶ್ವರ ಶಾಲೆಯವರೆಗಿನ ಮಾರ್ಕೆಟ್‌ರಸ್ತೆ ಸೊರಬ ರಸ್ತೆ ಅಗಲೀಕರಣ ಕಾಮಗಾರಿ ಕೈಗೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ:

ಆ) ಹಾಗಿದ್ದಲ್ಲಿ ರಸ್ತೆಯ ಅಗಲೀಕರಣ ಕಾಮಗಾರಿ ಕೈಗೊಳ್ಳಲು ಅನುದಾನ ಬಿಡುಗಡೆ ಮಾಡಲಾಗಿದೆಯೇ:

ಇ) ಎಷ್ಟು, ಅನುದಾನ ಬಿಡುಗಡೆ ಮಾಡಲಾಗಿದೆ: ಬಿಡುಗಡೆ ಮಾಡಿದ್ದಲ್ಲಿ ರಸ್ತೆ ಅಗಲೀಕರಣ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು;

ಈ) ರಸ್ತೆ ಅಗಲೀಕರಣ ಕಾಮಗಾರಿಯನ್ನು ಪೂರ್ಣಗೊಳಿಸಲು ಕಾಲಮಿತಿಯನ್ನು ನಿಗದಿಪಡಿಸಲಾಗಿದೆಯೇ: ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು):–

ಅ) ಸಾಗರ–ಹಾವೇರಿ ರಸ್ತೆ (ರಾಜ್ಯ ಹೆದ್ದಾರಿ–62), ಶಿವಪ್ಪನಾಯಕ ಸರ್ಕಲ್‌ನಿಂದ ಸಿದ್ದೇಶ್ವರ ಶಾಲೆಯವರೆಗಿನ ಮಾರ್ಕೆಟ್ ರಸ್ತೆ ಸೊರಬ ರಸ್ತೆ ಅಗಲೀಕರಣ ಕಾಮಗಾರಿ ಕೈಗೊಳ್ಳುವ ಪ್ರಸ್ತಾವನೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

ಸೇತುವೆ ನಿರ್ಮಾಣ

252 (462) ಶ್ರೀ ಗೋಪಾಲಕೃಷ್ಣ ಬೇಳೂರು (ಸಾಗರ) :– ಲೋಕೋಪಯೋಗಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–